# ಎಲ್ಲ ಮಹಿಳೆಯರನ್ನು ಗೌರವದಿಂದ ಕಾಣಿರಿ : ಜಿಪಂ ಸಿಇಒ ರಾಹುಲ್ ಶಿಂಧೆ



ಬೆಳಗಾವಿ: ಪ್ರತಿಯೊಬ್ಬ ಯಶಸ್ವಿ ಪುರುಷನ ಹಿಂದೆ ಮಹಿಳೆ ಇರುತ್ತಾಳೆ. ಈಗಿನ ಪ್ರಸ್ತುತ ಸಮಾಜದಲ್ಲಿ ಮಹಿಳೆಯರು ಎಲ್ಲಕ್ಷೇತ್ರಗಳಲ್ಲಿ ತಮ್ಮದೆಯಾದ ಚಾಪನ್ನು ಮೂಡಿಸಿದ್ದಾರೆ ಹಾಗೂ ಎಲ್ಲ ಸ್ತ್ರೀಯರ ಪಾತ್ರ ಕುಟುಂಬದಲ್ಲಿ ಅತೀ ಮುಖ್ಯ ವಾಗಿರುತ್ತದೆ ಎಂದು ಜಿಪಂ ಸಿಇಒ ರಾಹುಲ್ ಶಿಂಧೆ ರವರು ಹೇಳಿದರು. ನಗರದ ಹಳೆ ಜಿಪಂ ಸಭಾಭವ ನದಲ್ಲಿ (ಮಾ.13) ಬುಧವಾರ "ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ" ಕಾರ್ಯಕ್ರಮ ವನ್ನುಗಿಡಕ್ಕೆ ನೀರುಣಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.ಪ್ರತಿ ಕುಟುಂಬದಲ್ಲಿ ಮಹಿಳೆಯರ ಪಾತ್ರವೂ ಬಹುಮುಖ್ಯವಾಗಿದ್ದು, ಎಲ್ಲ ಮಹಿಳೆಯರನ್ನು ಗೌರವಿಸಿ ಹಾಗೂ ಜಿಲ್ಲಾ ಪಂಚಾಯತಿ ಕಛೇರಿಯ ವಾತಾವರಣ ಒಂದೇ ಕುಟುಂಬದಂತೆ ಇರಬೇಕು ಎಂದು ಕಛೇರಿಯ ಸಿಬ್ಬಂದಿಗಳಿಗೆ ಈ ಸಂದರ್ಭದಲ್ಲಿಮಾನ್ಯರು ಕಿವಿ ಮಾತು ಹೇಳಿದರು.ಈ ಸಂದರ್ಭದಲ್ಲಿ ರೇಖಾ ಡೊಳ್ಳಿನವರ ಉಪಕಾರ್ಯದರ್ಶಿ(ಆಡಳಿತ), ಜಿಲ್ಲಾ ಪಂಚಾಯುತಿಯು ಬಸವರಾಜ ಅಡವಿಮಠ ಉಪಕಾರ್ಯದರ್ಶಿ(ಅಭಿವೃದ್ಧಿ), ಗಂಗಾಧರ ದಿವಟರ್ ಯೋಜನಾ ನಿರ್ದೇಶಕರು, ಜಯಶ್ರೀ ನಂದೆಣ್ಣವರ ಸಹಾಯಕ ನಿರ್ದೇಶ ಕರು, ಎಲ್ಲಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಸುವರ್ಣ ಸಂಭ್ರಮ 50ರ ಜ್ಯೋತಿ ರಥಯಾತ್ರೆಗೆ ಸ್ವಾಗತ



ಮೂಡಲಗಿ: ಸುವರ್ಣ ಸಂಭ್ರಮ 50ರ ಜ್ಯೋತಿ ರಥಯಾತ್ರೆಯ ರಥಕ್ಕೆ ಬುಧುವಾರದಂದು ಪಟ್ಟಣದ ಮೂಡಲಗಿ ಶಿಕ್ಷಣ ಸಂಸ್ಥೆಯು ಮುಂಭಾಗ ತಾಲೂಕಾಡಳಿತದಿಂದ ಪೂಜಿಸಲ್ಲಿ ಭವ್ಯ ಸ್ವಾಗತಕೋರಿದರು.

ಅಂಗನವಾಡಿ ಕಾರ್ಯಕರ್ತೆಯರ ಆರತಿ ಮೇಳ ಹಾಗೂ ವಾದ್ಯಮೇಳಗಳ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳು ಪುರಸಭೆ ಸದಸ್ಯರು, ಕನ್ನಡಪರ ಸಂಘಟನೆ, ವಿವಿಧ ಸರ್ಘ ಸಂಸ್ಥೆಗಳ ಪದಾಧಿಕಾರಿಗಳು ಶಾಲಾ ವಿದ್ಯಾರ್ಥಿಗಳು ಉಪಸ್ಥಿತಿಯಲ್ಲಿ ಕಲ್ಮೇಶ್ವರ ವೃತ್ತದವರಿಗೆ ರಥಯಾತ್ರೆಯು ವಿವಿಧ ಕನ್ನಡ ಪರ ಜಯಘೋಷನೆಯೊಂದಿಗೆ ಜರುಗಿತು.

ಕಲ್ಮೇಶ್ವರ ವೃತ್ತದಲ್ಲಿ ಜರುಗಿದ ಸಭೆಯಲ್ಲಿ ತಹಶೀಲ್ದಾರ ಬಿ.ಎಸ್.ಕಡಕಬಾವಿ ಮತ್ತು ಬಿಇಒ ಅಜೀತ ಮನ್ನಿಕೇರಿ ಮಾತನಾಡಿ, ಮೈಸುರು ರಾಜ್ಯದಿಂದ ಕರ್ನಾಟಕವೆಂದು ಮರು ನಾಮಕರಣವಾಗಿ 50ನೇ ವರ್ಷಕ್ಕೆ ಪದಾರ್ಪಣೆ ಮಾಡಿದ ಸುವರ್ಣ ಸಂಭ್ರಮವನ್ನು ಸರ್ಕಾರ ಆಚರಿಸುತ್ತಿದೆ ಎಂದು ಹೇಳಿದರು.

ಕಸಾಪ ಮೂಡಲಗಿ ತಾಲೂಕಾ ಘಟಕದ ಅಧ್ಯಕ್ಷ ಡಾ.ಸಂಜಯ ಶಿಂಧಿಹಟ್ಟಿ ಮಾತನಾಡಿ, ಕನ್ನಡ ನಾಡು, ನುಡಿ, ಸಾಹಿತ್ಯ, ಸಂಸ್ಕೃತಿ, ಕಲೆಗಳ ಉಳಿವಿಗಾಗಿ ಹಿರಿಯ ತ್ಯಾಗ ಬಲಿದಾಣದಿಂದ ಪರಿಶ್ರಮ ಇದೆ ಎಂಬುದನ್ನು ಯುವಪೀಳಿಗೆ ತಿಳಿಸುವ ಉದೇಶದಿಂದ ಕರ್ನಾಟಕ ರಾಜ್ಯಾದ್ಯಾಂತ ರಥಯಾತ್ರೆಯು ಬಹಳ ವಿಜೃಂಭನೆಯಿಂದ ಜರುಗುತ್ತಿದೆ, ನಮ್ಮ ಮಕ್ಕಳು ಇಂದು ಆಧುನಿಕ ಸಂಸ್ಕೃತಿಗೆ ಹೆಚ್ಚು ಆಕರ್ಷಿತಿರಾಗತಿರತಕ್ಕಂತ ಸಂಧರ್ಭದಲ್ಲಿ ಯುವಕರಲ್ಲಿ ಕನ್ನಡದ ಅಭಿಮಾನವನ್ನು ತುಂಬುಲ್ಲಿಕ್ಕೆ ರಥಯಾತ್ರೆಯ ಮುಖ್ಯ ಉದ್ದೇಶವಾಗಿದೆ ಎಂದರು.

ಈ ಸಂದರ್ಭದಲ್ಲಿ ಸಿಡಿಪಿಒ ಯಲ್ಲಪ್ಪ ಗದಾಡಿ, ಪುರಸಭೆ ಪ್ರಭಾರಿ ಮುಖ್ಯಾಧಿಕಾರಿ ಸಿ.ಬಿ.ಪಾಟೀಲ, ಪಶು ವೈದ್ಯಾಧಿಕಾರಿ ಡಾ. ಮೋಹನ ಕಮತ, ಪುರಸಭೆ ಆರೋಗ್ಯ ಹಿರಿಯ ನರೀಕ್ಷಕ ಸಿ.ಎಂ.ಮುಗಳಖೋಡ, ಉಪತಹಶೀಲ್ದಾರ ಪರುಶರಾಮ ನಾಯಕ, ಸರಕಾರಿ ಶಾಲಾ-ಕಾಲೇಜು, ಮೂಡಲಗಿ ಶಿಕ್ಷಣ ಸಂಸ್ಥೆಯ ಅಂಗ ಸಂಸ್ಥೆಯ ಮತ್ತು ವಿಬಿಎಸ್ಎಮ್ ಶಾಲೆ, ಅಲ್ಪಸಂಖ್ಯಾತರ ಮುರಾರ್ಜಿದೇಸಾಯಿ ಶಾಲೆ ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು, ಅಂಗನವಾಡಿ ಕಾರ್ಯಕರ್ತೆಯರು, ಪುರಸಭೆ ಸದಸ್ಯರು, ಕಂದಾಯ ನರೀಕ್ಷಕ ಸಂಗಪ್ಪ ಹೊಸಮನಿ, ಸುಭಾಸ ಪೂಜೇರಿ, ಈರಪ್ಪ ಢವಳೇಶ್ವರ, ಬಿ.ವಾಯ್.ಶಿವಾಪೂರ ಮತ್ತಿತರು ಇದ್ದರು. ಶಿಕ್ಷಕ ಎ.ಪಿ.ಪರಸನ್ನವರ ನರೂಪಿಸಿ ಸ್ವಾಗತಿಸಿದರು.

# ಮಕ್ಕಳ ರಕ್ಷಣಾ ಘಟಕದಿಂದ ಬಾಲ್ಯವಿವಾಹ ತಡೆದು, ಬಾಲಕಿಯ ರಕ್ಷಣೆ

ಕೊಪ್ಪಳ, ಮಾರ್ಚ್-: ಯಲಬುರ್ಗಾ ತಾಲ್ಲೂಕಿನ ತಲ್ಲೂರು ಗ್ರಾಮದಲ್ಲಿ ಮಾರ್ಚ್ 11 ರಂದು ಆಯೋಜಿಸಿದ್ದ ಸಾಮೂಹಿಕ ಮದುವೆ ಕಾರ್ಯಕ್ರಮದಲ್ಲಿ ನಡೆಯಬೇಕಿದ್ದ ಬಾಲ್ಯ ವಿವಾಹವನ್ನು ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಇತರೆ ಇಲಾಖೆಗಳ ಸಹಕಾರದಲ್ಲಿ ತಡೆದಿದ್ದು, ಬಾಲಕಿಯನ್ನು ಮುಂದಿನ ಪೋಷಣೆ ಹಾಗೂ ರಕ್ಷಣೆಗಾಗಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಗೆ ಹಾಜರು ಪಡಿಸಲಾಗಿದೆ.ಮಾರ್ಚ್ 11 ರಂದು ತಲ್ಲೂರು ಗ್ರಾಮದಲ್ಲಿ ಶ್ರೀ ಶರಣಬಸವೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಆಯೋಜಿಸಿದ್ದ ಸಾಮೂಹಿಕ ವಿವಾಹದಲ್ಲಿ ಅಪ್ರಾಪ್ತ ವಯಸ್ಸಿನ ಬಾಲಕಿಯೊಬ್ಬಳಿಗೆ ಬಾಲ್ಯ ವಿವಾಹವನ್ನು ಮಾಡಲಾಗುತ್ತಿದೆ ಎಂದು ಮಕ್ಕಳ ಸಹಾಯವಾಣಿ-1098/112ಗೆ ಮಾಹಿತಿ ಬಂದ ಹಿನ್ನಲೆಯಲ್ಲಿ,ಆ ಗ್ರಾಮ ಪಂಚಾಯತ್ ವ್ಯಾಪ್ತಿಯ ಅಂಗನವಾಡಿ ಮೇಲ್ವಿಚಾರಕಿಯರು, ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಲೆಕ್ಕಾಧಿಕಾರಿಗಳು, ಶಾಲಾ ಮುಖ್ಯೋಪಾಧ್ಯಾಯರು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮತ್ತು ಮಕ್ಕಳ ಸಹಾಯವಾಣಿ-1098/112 ಸಿಬ್ಬಂದಿಗಳು ತುರ್ತಾಗಿ ಸ್ಥಳಕ್ಕೆ ಧಾವಿಸಿ,ಬಾಲಕಿಯ ಮನೆಗೆ ಭೇಟಿ ಮಾಡಿ ವಿಚಾರಿಸಿದ್ದು,ವಿವಾಹವನ್ನು ಮಾಡುತ್ತಿರುವುದು ತಿಳಿದು ಬಂದಿತು. ಬಾಲ್ಯವಿವಾಹ ನಿಷೇಧ ಕಾಯ್ದೆ-2006ರ ಕುರಿತು ಹಾಗೂ ಬಾಲ್ಯವಿವಾಹದ ದುಷ್ಪರಿಣಾಮಗಳ ಬಗ್ಗೆ ತಿಳುವಳಿಕೆಯನ್ನು ನೀಡಿ, ಬಾಲಕಿಗೆ 18 ವರ್ಷ (05.01.2008) ಪೂರ್ಣಗೊಳ್ಳದ ಕಾರಣ ಬಾಲಕಿಯನ್ನು ರಕ್ಷಿಸಿ, ಪೋಷಣೆ ಮತ್ತು ರಕ್ಷಣೆಗಾಗಿ, ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಹಾಜರುಪಡಿಸಲು ತೀರ್ಮಾನಿಸಲಾಯಿತು.ಈ ಸಂದರ್ಭದಲ್ಲಿ ಬಾಲಕಿಯನ್ನು ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ತುರ್ತಾಗಿ ಹಾಜರುಪಡಿಸಲು ವಾಹನ ಲಭ್ಯವಾಗದಿದ್ದರಿಂದಾಗಿ, ಯಲಬುರ್ಗಾ ತಹಶೀಲ್ದಾರರು ತಮ್ಮ ಸರಕಾರಿ ವಾಹನವನ್ನು ನೀಡುವ ಮೂಲಕ ಬಾಲಕಿಯನ್ನು ಮುಂದಿನ ಪೋಷಣೆ ಮತ್ತು ರಕ್ಷಣೆ ಹಿತದೃಷ್ಟಿಯಿಂದ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಗೆ ಹಾಜರುಪಡಿಸಲು ಸಹಕರಿಸಿದ್ದಾರೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ತಿಳಿಸಿದ್ದಾರೆ.

## ವಿಕಲಚೇತನರ ವ್ಯಕ್ತಿಗಳಿಂದ ಅರ್ಜಿ ಆಹ್ವಾನ

ಬೆಳಗಾವಿ,ಮಾ.-: ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಆಧಾರ ಯೋಜನೆಯ ಮಾರ್ಗಸೂಚಿಯನ್ವಯ, ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯಲ್ಲಿ ವಿಕಲಚೇತನರಿಗಾಗಿ ಶ್ರಮಿಸುತ್ತಿರುವ ಸ್ವಯಂ-ಸೇವಾ ಸಂಸ್ಥೆಯ ಒಬ್ಬರು ಪ್ರತಿನಿಧಿ ಹಾಗೂ ವಿಕಲಚೇತನರಿಗಾಗಿ ಶ್ರಮಿಸುತ್ತಿರುವ ಒಬ್ಬರು ವಿಕಲಚೇತನ ವ್ಯಕ್ತಿಯನ್ನು 2 ವರ್ಷದ ಅವಧಿಗೆ ಆಯ್ಕೆ ಸಮಿತಿಯ ಸದಸ್ಯರನ್ನಾಗಿ ಜಿಲ್ಲಾ ಪಂಚಾಯತಿಯ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ನಾಮನಿರ್ದೇಶನ ಮಾಡಬೇಕಾಗಿದೆ.ಬೆಳಗಾವಿ ಜಿಲ್ಲೆಯಲ್ಲಿ ವಿಕಲಚೇತನರಿಗಾಗಿ ಶ್ರಮಿಸುತ್ತಿರುವ ಸ್ವಯಂ-ಸೇವಾ ಸಂಸ್ಥೆಗಳು ಹಾಗು ವಿಕಲಚೇತನರಿಗಾಗಿ ಶ್ರಮಿಸುತ್ತಿರುವ ವಿಕಲಚೇತನ ವ್ಯಕ್ತಿಗಳಿಂದ ಮರು ಅರ್ಜಿ ಆಹ್ವಾನಿಸಲಾಗಿದ್ದು, ಆಸಕ್ತಿಯುಳ್ಳ ಅರ್ಹ ಸಂಸ್ಥೆ ಹಾಗೂ ವಿಕಲಚೇತನ ವ್ಯಕ್ತಿಗಳು ಏ. 12 ಒಳಗಾಗಿ ನಿಗದಿತ ಅರ್ಜಿ ನಮೂನೆಯಲ್ಲಿ ಭರ್ತಿ ಮಾಡಿದ ಅರ್ಜಿಯನ್ನು ಸೂಕ್ತ ದಾಖಲಾತಿಗಳೊಂದಿಗೆ ಜಿಲ್ಲಾ ಅಂಗವಿಕಲರ ಕಛೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಛೇರಿ ಅಥವಾ ಆಯಾ ತಾಲೂಕಿನ ಎಂ.ಆರ್.ಡಬ್ಲ್ಯೂ.ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಬೆಳಗಾವಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇಸಿ ತರಬೇತಿ ಸಮಾರೋಪ ಸಮಾರಂಭ

## ತರಬೇತಿಯಲ್ಲಿನ ಅಂಶಗಳನ್ನು ಕಾರ್ಯರೂಪಕ್ಕೆ ತಂದು ರೈತರಿಗೆ ಅನುಕೂಲ ಕಲ್ಪಿಸಿ:ಡಿಸಿ



ಕೊಪ್ಪಳ, ಮಾರ್ಚ್-: ಕೃಷಿ ವಿಸ್ತರಣಾ ಸೇವೆಯಲ್ಲಿ ಡಿಪ್ಲೊಮಾ ಕೋರ್ಸ್ ಪೂರ್ಣಗೊಳಿಸಿದ ಎಲ್ಲ ತರಬೇತಾರ್ಥಿಗಳು ತರಬೇತಿಯುಲ್ಲಿ ಕಲಿತ ಅಂಶಗಳನ್ನು ಕಾರ್ಯರೂಪಕ್ಕೆ ತಂದು ನಮ್ಮ ಸುತ್ತಲಿನ ರೈತರಿಗೆ ಅನುಕೂಲ ಕಲ್ಪಿಸಿಕೊಡಿ ಎಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ಹೇಳಿದರು.

ಬುಧವಾರದಂದು ಜಿಲ್ಲಾ ಪಂಚಾಯುತಿಯು ಜೆ.ಎಚ್.ಪಟೇಲ್ ಸಭಾಂಗಣದಲ್ಲಿ ಒಂಒಂಉಇ ಹೈದರಾಬಾದ್, ಸಮೇತಿ(ಉತ್ತರ) ಕೃ.ವಿ.ವಿ. ಧಾರವಾಡ, ಕೃಷಿ ಇಲಾಖೆ ಕೊಪ್ಪಳ, ಕೃಷಿ ತಂತ್ರಜ್ಞರ ಸಂಸ್ಥೆ ಕೊಪ್ಪಳ ಹಾಗೂ ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಗಂಗಾವತಿ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಕೃಷಿ ವಿಸ್ತರಣಾ ಸೇವೆಯಲ್ಲಿ ಡಿಪ್ಲೊಮಾ ಕೋರ್ಸ್ (ಆಂಇಖಊ) ಪೂರ್ಣಗೊಳಿಸಿದ ಕೃಷಿ ಪರಿಕರ ಮಾರಾಟಗಾರರ ಟಿ.ಪಿ ಸಂಖ್ಯೆ 1963 ಹಾಗೂ 1964 ಬ್ಯಾಚುಗಳ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭಾರತದಲ್ಲಿ ಸುಮಾರು 2.82 ಲಕ್ಷ ಕೃಷಿ-ಇನ್‌ಪುಟ್ ಡೀಲರ್‌ಗಳಿದ್ದಾರೆ. ಅವರು ರೈತ ಸಮುದಾಯಕ್ಕೆ ಕೃಷಿ ಮಾಹಿತಿಯ ಪ್ರಧಾನ ಮೂಲವಾಗಿದ್ದಾರೆ. ಹೆಚ್ಚಿನ ರೈತರಿಗೆ ಮೊದಲ ಸಂಪರ್ಕ ಕೇಂದ್ರವೆಂದರೆ ಕೃಷಿ-ಇನ್‌ಪುಟ್ ಡೀಲರ್. ಕೃಷಿ ಕಾರ್ಯಾಚರಣೆಗೆ ಅಗತ್ಯವಿರುವ ವಿವಿಧ ಇನ್‌ಪುಟ್‌ಗಳನ್ನು ಖರೀದಿಸುವಾಗ ರೈತರು ಸ್ವಾಭಾವಿಕವಾಗಿ ಗುಣಮಟ್ಟ ಮತ್ತು ಪ್ರಮಾಣದಲ್ಲಿ ಒಳಹರಿವಿನ ಬಳಕೆಯ ಬಗ್ಗೆ ಇನ್‌ಪುಟ್ ಡೀಲರ್‌ನಂದ ಮಾಹಿತಿ ಪಡೆಯಲು ಪ್ರಯತ್ನಿಸುತ್ತಾರೆ. ರೈತರಿಗೆ ನಮ್ಮ ಮೇಲೆ ನಂಬಿಕೆ ಇರುತ್ತದೆ. ಆದ್ದರಿಂದ ನೀವು ರೈತರು ಹಾಗೂ ಕೃಷಿ ಭೂಮಿಗೆ ಪೂರಕವಾಗಬಲ್ಲ ಸಲಹೆ, ಮಾಹಿತಿಗಳನ್ನು ರೈತರಿಗೆ ನೀಡಬೇಕು. ಈ ಕುರಿತು ತರಬೇತಿಯಲ್ಲಿ ಸಾಕಷ್ಟು ವಿಷಯಗಳನ್ನು ಕಲಿತಿರುತ್ತೀರಿ. ಅವುಗಳನ್ನು ಪ್ರಾಯೋಗಿಕವಾಗಿ ನಮ್ಮ ಅಂಗಡಿಗಳಲ್ಲಿ, ನಮ್ಮ ಬಳಿ ಬರುವ ರೈತರಿಗೆ ಸೂಕ್ತ ಮಾಹಿತಿ ನೀಡುವುದರ ಮೂಲಕ ರೈತರಿಗೆ ನೆರವಾಗಿ ಎಂದು ಜಿಲ್ಲಾಧಿಕಾರಿಗಳು ತರಬೇತಾರ್ಥಿಗಳಿಗೆ ತಿಳಿಸಿದರು.

ಇನ್‌ಪುಟ್ ಡೀಲರ್‌ಗಳನ್ನು ಅಗತ್ಯವಾದ ಜ್ಞಾನವನ್ನು ಒದಗಿಸುವುದರ ಮೂಲಕ ಪ್ಯಾರಾ-ವಿಸ್ತರಣಾ ವೃತ್ತಿಪರರಾಗಿ ರೂಪಿಸಬಹುದು. ಅವರು ವಿಸ್ತರಣಾ ಸೇವೆಗಳನ್ನು ವೃತ್ತಿಪರಗೊಳಿಸಬಹುದು ಮತ್ತು ಭಾರತೀಯ ಕೃಷಿಯಲ್ಲಿ ಮಾದರಿ ಬದಲಾವಣೆಯನ್ನು ತರಲು ಕೊಡುಗೆ ನೀಡಬಹುದು. ಈ ಹಿನ್ನೆಲೆಯಲ್ಲಿ ರಾಷ್ಟ್ರೀಯ ಕೃಷಿ ವಿಸ್ತರಣಾ ನಿರ್ವಹಣಾ ಸಂಸ್ಥೆ(ಮ್ಯಾನೇಜ್) ಒಂದು ವರ್ಷದ ಡಿಪ್ಲೊಮಾ ಕೋರ್ಸ್ ಎಂಬ ಶೀರ್ಷಿಕೆಯುಡಿ ವಿನ್ಯಾಸಗೊಳಿಸಿದೆ. ಇದು ಸಜ್ಜುಗೊಳಿಸಲು ಸಂಬಂಧಿತ ಮತ್ತು ಸ್ಥಳ-ನಿರ್ದಿಷ್ಟ ಕೃಷಿ ಶಿಕ್ಷಣವನ್ನು ನೀಡುತ್ತದೆ. ಕ್ಷೇತ್ರ ಮಟ್ಟದಲ್ಲಿ ರೈತರು ಎದುರಿಸುತ್ತಿರುವ ದಿನನಿತ್ಯದ ಸಮಸ್ಯೆಗಳನ್ನು ಪರಿಹರಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೆಯ ಅವರು ಮಾತನಾಡಿ, ಕೃಷಿ ಪರಿಕರ ಮಾರಾಟಗಾರರಿಗೆ ನೀಡಿರುವ ತರಬೇತಿಯು ಕ್ಷೇತ್ರಮಟ್ಟದಲ್ಲಿ ರೈತರೊಂದಿಗೆ ವ್ಯವಹರಿಸಲು, ರೈತರಿಗೆ ಸೂಕ್ತ ಮಾಹಿತಿಯನ್ನು ನೀಡಲು ಸಹಾಯಕವಾಗಿದೆ. ರೈತರು ನಮ್ಮ ಬಳಿ ಯಾವುದೇ ಕೃಷಿ ಪರಿಕರ ಖರೀದಿಗೆ ಬಂದಾಗ ಅವರೊಂದಿಗೆ ಗೌರವ ಹಾಗೂ ಸೌಜನ್ಯಯುತವಾಗಿ ವರ್ತಿಸಿ. ಅವರು ಬಯಸುವ ಪರಿಕರದ ಕುರಿತು, ಕೃಷಿ ಇಲಾಖೆಯ ವಿವಿಧ ಯೋಜನೆಗಳ ಬಗ್ಗೆ ಸೂಕ್ತ ಮಾಹಿತಿ ನೀಡಿ. ಸರ್ಕಾರ ಹಾಗೂ ರೈತರ ನಡುವೆ ನೀವು ಸೇತುವೆಯಂತೆ ಕಾರ್ಯನಿರ್ವಹಿಸಿ ಸರ್ಕಾರದ ಕೃಷಿ ಯೋಜನೆ, ಸೌಲಭ್ಯಗಳು ರೈತರಿಗೆ ದೊರೆಯುವಂತೆ ಮಾಡಬೇಕು. ಈಗ ಪಡೆದಿರುವ ತರಬೇತಿಯನ್ನು ಸಕಾರಾತ್ಮಕವಾಗಿ ಬಳಸಿಕೊಂಡು, ಗುಣಾತ್ಮಕ ವ್ಯವಹಾರಗಳಿಂದ ರೈತರಿಗೆ ಸಹಾಯ ಮಾಡಿ ಎಂದು ಹೇಳಿದರು.

ಜಂಟಿ ಕೃಷಿ ನಿರ್ದೇಶಕರಾದ ರುದ್ರೇಶಪ್ಪ ಟಿ.ಎಸ್. ಅವರು ಮಾತನಾಡಿ, ಜಿಲ್ಲೆಯಲ್ಲಿ 593 ಇನ್‌ಪುಟ್ ಡೀಲರ್‌ಗಳು ಪರವಾನಗೆ ಹೊಂದಿದ್ದು, ಈಗಾಗಲೇ 40 ಅಭ್ಯರ್ಥಿಗಳನ್ನು ಹೊಂದಿರುವ 8ತರಬೇತಿಗಳನ್ನು ಆಯೋಜಿಸಿ 400 ಡೀಲರ್‌ಗಳಿಗೆ ತರಬೇತಿ ನೀಡಲಾಗಿದೆ. ಇಂದು 2 ಬ್ಯಾಚ್‌ಗಳ ತರಬೇತಿ ಪೂರ್ಣಗೊಂಡಿರುವ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸುವ ಮೂಲಕ ಈ ಬ್ಯಾಚ್‌ನ ತರಬೇತಿಯನ್ನು ಸಮಾರೋಪಗೊಳಿಸಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತರಬೇತಾರ್ಥಿಗಳಿಗೆ ಪ್ರಮಾಣ ಪತ್ರವನ್ನು ವಿತರಿಸಲಾಯಿತು. ಧಾರವಾಡ ಕೃಷಿ ವಿಶ್ವ ವಿದ್ಯಾಲಯದ ಪ್ರಾಧ್ಯಾಪಕರು ಹಾಗೂ ರಾಜ್ಯ ನೋಡಲ್ ಅಧಿಕಾರಿಗಳು(ದೇಸಿ) ಹಾಗೂ ಸಂಯೋಜಕರು ಸಮೇತಿ(ಉತ್ತರ) ಆದ ಡಾ.ಎಂ. ಗೋಪಾಲ ಅವರು ತರಬೇತಾರ್ಥಿಗಳಿಗೆ ಕಾರ್ಯನಿರ್ವಹಣೆಯ ಕುರಿತು ಪ್ರತಿಜ್ಞಾವಿಧಿ ಬೋಧಿಸಿದರು.

ಈ ಸಂದರ್ಭ ಗಂಗಾವತಿಯ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ.ರಾಘವೇಂದ್ರ ಎಲಿಗಾರ, ಕೊಪ್ಪಳ ಕೃಷಿ ವಿಸ್ತರಣಾ ಕೇಂದ್ರದ ಮುಖ್ಯಸ್ಥರಾದ ಡಾ.ಎಂ.ವಿ. ರವಿ, ಉಪ ಕೃಷಿ ನಿರ್ದೇಶಕರಾದ ಸಹದೇವ ಯರಗೊಪ್ಪ, ಬೆಂಗಳೂರು ಕೃಷಿ ತಂತ್ರಜ್ಞರ ಸಂಸ್ಥೆಯ ಕಾರ್ಯದರ್ಶಿಗಳಾದ ವೀರಣ್ಣ ಕಮತರ, ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕರಷಿ ನಿರ್ದೇಶಕರಾದ ಡಾ.ಚಂದ್ರಕಾಂತ ನಾಡಗೌಡ, ದೇಸಿ ಫೆಸಿಲಿಟೇಟರ್ ಜಂಬಣ್ಣ, ಗಂಗಾವತಿ ಸಹಾಯಕ ಕೃಷಿ ನಿರ್ದೇಶಕರಾದ ಸಂತೋಷ ಪಟ್ಟದಕಲ್ ಸೇರಿದಂತೆ ತರಬೇತಾರ್ಥಿಗಳು, ಕೃಷಿ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ಬಂಡಾಯ ಬಾವುಟ ಹಾರಿಸಿದ ಈಶ್ವರಪ್ಪ

ಶಿವಮೊಗ್ಗ,ಮಾ.- ಒಂದು ವೇಳೆ ಹಾವೇರಿ ಗದಗ ಕ್ಷೇತ್ರದಿಂದ ಟಿಕೆಟ್ ಕೈತಪ್ಪಿದರೆ ಸದ್ಯದಲ್ಲೇ ಬೆಂಬಲಿಗರ ಕರೆದು ಸಭೆ ನಡೆಸಿ ಅವರಿಂದ ಅಭಿಪ್ರಾಯ ಪಡೆದುಕೊಂಡು ಮುಂದಿನ ನಿರ್ಧಾರ ಕೈಗೊಳ್ಳುವುದಾಗಿ ಮಾಜಿ ಸಚಿವ, ಬಿಜೆಪಿಯ ಹಿರಿಯ ನಾಯಕ ಕೆ.ಎಸ್.ಈಶ್ವರಪ್ಪ ಹೇಳಿದರು.ಈ ಮೂಲಕ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ತವರು ಜಿಲ್ಲೆಯಲ್ಲಿ ಬಿಜೆಪಿ ಬಂಡಾಯದ ಬಾವುಟ ಜೋರಾಗಿದ್ದು, ಈಶ್ವರಪ್ಪ ಪುತ್ರ ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕಿಳಿಯುವ ವದಂತಿಗಳು ದಟ್ಟವಾಗಿದೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಂಡಾಯ ಅಭ್ಯರ್ಥಿ ಆಗಿ ನಿಲ್ಲಲು ಬೆಂಬಲಿಗರಿಂದ ಒತ್ತಾಯವಿದೆ. ಅವರೊಂದಿಗೆ ಸಭೆ ನಡೆಸಿ ಅಭಿಪ್ರಾಯ ಪಡೆದುಕೊಂಡು ಮುಂಬರುವ ಚುನಾವಣೆಯಲ್ಲಿ ಸ್ಪರ್ಧಿಸುವ ಕುರಿತು ಸೂಕ್ತ ನಿರ್ಧಾರ ಕೈಗೊಳ್ಳುವೆ ಎಂದು ಹೇಳಿದರು.

ಇದು ನನ್ನ ರಾಜಕೀಯ ಭವಿಷ್ಯ. ಇದು ರಾಜ್ಯದ ರಾಜಕೀಯದ ಭವಿಷ್ಯ. ಹಿತೈಷಿಗಳು ನನಗೆ ಅನ್ಯಾಯವಾಗಿದೆ ಎಂದು ರಾಜ್ಯದೆಲ್ಲಡೆ ಕರೆಬಂದಿದೆ ಎಂದರು. ಕಳೆದ ವಿಧಾನಸಭೆ ಚುನಾವಣೆ ಸಾಕಷ್ಟು ತಪ್ಪು ಆಗಿದೆ. ಈ ಹಿನ್ನಲೆಯಲ್ಲಿ ಸೋಲು ಆಗಿತ್ತು. ಅದನ್ನು ಸರಿಪಡಿಸಡೇಕಿದೆ. ಈ ನಿಟ್ಟಿನಲ್ಲಿ ಬೆಂಬಲಿಗರ ಸಭೆ ಕರೆಯಲಾಗಿದೆ. ಸಭೆಯಲ್ಲಿ ಅವರ ಅಭಿಪ್ರಾಯ ಕೇಳುತ್ತೇನೆ.

ಬಳಿಕ ನಾನು ಸ್ಪರ್ಧೆ ಮಾಡಬೇಕೆ, ಬೇಡವೇ ಎಂಬುದರ ಬಗ್ಗೆ ತೀರ್ಮಾನ ಮಾಡುತ್ತೇನೆ ಎಂದರು.

ಹಾವೇರಿ ಗದಗ ಲೋಕಸಭೆ ಕ್ಷೇತ್ರದಲ್ಲಿ ಟಿಕೆಟ್ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಹಾಲಿ ಸಂಸದ ಶಿವಕುಮಾರ ಉದಾಸಿ ಸ್ಪರ್ಧೆ ಮಾಡುವುದಿಲ್ಲ ಎಂದು ಹೇಳಿದ್ದರು.

ಆ ಬಳಿಕವಷ್ಟೇ ನಾನು ನನ್ನ ಪುತ್ರನೊಂದಿಗೆ ಹೋಗಿ ಯಡಿಯೂರಪ್ಪನವರನ್ನು ಭೇಟಿ ಮಾಡಿದ್ದೇವೆ. ಅವರು ಹಾವೇರಿ ಗದಗ ಕ್ಷೇತ್ರದ ಟಿಕೆಟ್ ನೀಡುವುದಲ್ಲದೆ, ಅವರೇ ನನ್ನ ಮಗನ ಪರ ಪ್ರಚಾರ ಮಾಡಿ ಗೆಲ್ಲಿಸುವ ಭರವಸೆ ನೀಡಿದ್ದಾರೆ ಎಂದು ಹೇಳಿದರು.

ಪೌರತ್ವ ಕಾಯ್ದೆ ತಿದ್ದುಪಡಿ ಜಾರಿಗೆ ಕಾಂಗ್ರೆಸ್ ನಾಯಕರಿಂದ ಟೀಕೆ



ಶುರುವಾಗಿದೆ. ದೇಶ ವಿಭಜನೆ ಸಂದರ್ಭದಲ್ಲಿ ಪಾಕಿಸ್ತಾನದಲ್ಲಿ ಇದ್ದ ಶೇ.20.5ರಷ್ಟು ಹಿಂದೂಗಳ ಸಂಖ್ಯೆ ಈಗ ಶೇ.1.9 ಇಳಿಕೆ ಆಗಿದೆ. ಪಾಕ್ನಲ್ಲಿರುವ ಹಿಂದೂಗಳ 18 ಕಡಿಮೆಯಾಗಲು ಕಾರಣವೇನು? ಇದರ ಬಗ್ಗೆ ಕಾಂಗ್ರೆಸ್ ಉತ್ತರ ನೀಡಬೇಕು ಎಂದರು.

# ಸ್ಥಿರಾಸ್ತಿಗಳ ಪತ್ರಗಳ ನೋಂದಣಿಗೆ ಅವಕಾಶ

ಬೆಳಗಾವಿ,ಮಾ.13-:ಬೆಳಗಾವಿ ಜಿಲ್ಲಾ ನೋಂದಣಾಧಿಕಾರಿಗಳ ವ್ಯಾಪ್ತಿಯಲ್ಲಿನ ನೋಂದಣಿ ಕಛೇರಿಗಳಲ್ಲಿ (ಯಾವುದೇ ಸ್ಥಳದಲ್ಲಿ ನೋಂದಣಿ) any where Registration ವ್ಯವಸ್ಥೆಯನ್ನು ಮಾ. 14 ರಿಂದ ನೋಂದಣಿಗೆ ಅವಕಾಶ ಕಲ್ಪಿಸಲಾಗಿದೆ. ಬೆಳಗಾವಿ ಜಿಲ್ಲೆಯ ಎಲ್ಲ 17 ಉಪ ನೋಂದಣಿ ಕಛೇರಿಗಳ ವ್ಯಾಪ್ತಿಯ ಸ್ಥಿರಾಸ್ತಿಗಳ ಪತ್ರಗಳನ್ನು ಬೆಳಗಾವಿ ಜಿಲ್ಲೆಯ 17 ಉಪ ನೋಂದಣಿ ತಮ್ಮ ಹತ್ತಿರದ ಕಚೇರಿಯಲ್ಲಿ ನೋಂದಣಿ ಮಾಡಿಸಬಹುದು ಎಂದು ಬೆಳಗಾವಿ ಜಿಲ್ಲಾ ನೋಂದಣಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯಂತ್ರಚಾಲಿತ ದ್ವಿಚಕ್ರ ವಾಹನ ವಿಕಲಚೇತನರಿಗೆ ಅರ್ಜಿ ಆಹ್ವಾನ

ಬೆಳಗಾವಿ,ಮಾ-: ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಯಂತ್ರಚಾಲಿತ ದ್ವಿಚಕ್ರ ವಾಹನ ಯೋಜನೆಯ ಮಾರ್ಗಸೂಚಿಯನ್ವಯ, ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯಲ್ಲಿ ವಿಕಲಚೇತನರಿಗಾಗಿ ಶ್ರಮಿಸುತ್ತಿರುವ ಸ್ವಯಂ-ಸೇವಾ ಸಂಸ್ಥೆಯ ಒಬ್ಬರು ಪ್ರತಿನಿಧಿ ಹಾಗೂ ವಿಕಲಚೇತನರಿಗಾಗಿ ಶ್ರಮಿಸುತ್ತಿರುವ ಒಬ್ಬರು ವಿಕಲಚೇತನ ವ್ಯಕ್ತಿಯನ್ನು 2 ವರ್ಷದ ಅವಧಿಗೆ ಆಯ್ಕೆ ಸಮಿತಿಯ ಸದಸ್ಯರನ್ನಾಗಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ನಾಮನಿರ್ದೇಶನ ಮಾಡಬೇಕಾಗಿದೆ.

ಬೆಳಗಾವಿ ಜಿಲ್ಲೆಯಲ್ಲಿ ವಿಕಲಚೇತನರಿಗಾಗಿ ಶ್ರಮಿಸುತ್ತಿರುವ ಸ್ವಯಂ-ಸೇವಾ ಸಂಸ್ಥೆಗಳು ಹಾಗು ವಿಕಲಚೇತನರಿಗಾಗಿ ಶ್ರಮಿಸುತ್ತಿರುವ ವಿಕಲಚೇತನ ವ್ಯಕ್ತಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಅರ್ಹ ಸಂಸ್ಥೆ ಹಾಗೂ ವಿಕಲಚೇತನ ವ್ಯಕ್ತಿಗಳು ಏ. 12 ಒಳಗಾಗಿ ನಿಗದಿತ ಅರ್ಜಿ ನಮೂನೆಯಲ್ಲಿ ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲಾತಿಗಳೊಂದಿಗೆ ಜಿಲ್ಲಾ ಅಂಗವಿಕಲರ ಕಛೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಛೇರಿ ಅಥವಾ ಆಯಾ ತಾಲೂಕಿನ ಎಂ.ಆರ್.ಡಬ್ಲ್ಯೂ. ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಬೆಳಗಾವಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಜೆಪಿಯಿಂದ ಅನಾವಶ್ಯಕ ಅಪಪ್ರಚಾರ ಗ್ಯಾರಂಟಿ ಯೋಜನೆಗಳ ಸಮಾವೇಶದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿಕೆ

ಉಡುಪಿ : ಕರ್ನಾಟಕ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳನ್ನು ಕೇವಲ ಪ್ರಚಾರಕ್ಕಾಗಿ ಜಾರಿಗೆ ತಂದಿಲ್ಲ. ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳು ನಿಲ್ಲುವುದಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರು ಹಾಗೂ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರಾದ ಲಕ್ಷ್ಮೀ ಆರ್ ಹೆಬ್ಬಾಳ್ಕರ್ ಹೇಳಿದ್ದಾರೆ.

ಉಡುಪಿಯ ಕುಂಜಿಬೆಟ್ಟುವಿನ ಲಕ್ಷ್ಮೀ ನಾರಾಯಣ ರಾವ್ ಕ್ರೀಡಾಂಗಣದಲ್ಲಿ ಬುಧವಾರ ನಡೆದ ಗ್ಯಾರಂಟಿ ಯೋಜನೆಗಳ ಸಮಾವೇಶ ಹಾಗೂ ಜಿಲ್ಲೆಯ ವಿವಿಧ ಕಾಮಗಾರಿಗಳ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಸಚಿವರು, ಗ್ಯಾರಂಟಿ ಯೋಜನೆಗಳ ಬಗ್ಗೆ ವಿರೋಧ ಪಕ್ಷಗಳು ಅನಾವಶ್ಯಕವಾಗಿ ಟೀಕೆ ಮಾಡುತ್ತಿವೆ ಎಂದು ಕಿಡಿ ಕಾರಿದರು. ರಾಜ್ಯದ ಜನತೆಯ ಅಭೂತಪೂರ್ವ ಆಶೀರ್ವಾದದಿಂದ ಆಡಳಿತಕ್ಕೆ ಬಂದ ನಮ್ಮ ಸರ್ಕಾರವು ಜಾರಿಗೆ ತಂದಿರುವ ಐದು ಗ್ಯಾರಂಟಿ ಯೋಜನೆಗಳು ರಾಜ್ಯದ ಜನತೆಯ ಸಂಜೀವಿನಿಯಾಗಿವೆ. ಚುನಾವಣೆ ಪ್ರಣಾಳಿಕೆಯಲ್ಲಿ ಘೋಷಿಸಿದಂತೆ, ಐದಕ್ಕೆ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ, ನಮ್ಮ ಸರ್ಕಾರವು ನುಡಿದಂತೆ ನಡೆದಿದೆ ಎಂದು ಹೇಳಿದರು.

ಈಗ ದೇಶವೇ ನಮ್ಮ ರಾಜ್ಯದತ್ತ ನೋಡುತ್ತಿದೆ. ಇತರೆ ರಾಜ್ಯಗಳಿಗೆ ನಮ್ಮ ಸರ್ಕಾರವು ಮಾದರಿಯಾಗಿದೆ. ನಮ್ಮ ಸರ್ಕಾರದಂತೆಯೇ ಅಲ್ಲಿಯೂ ಗ್ಯಾರಂಟಿ ಯೋಜನೆಗಳನ್ನು ನೀಡುತ್ತಿದ್ದಾರೆ. ಮಹಿಳೆಯರನ್ನು ಸಶಕ್ತರನ್ನಾಗಿ ಮಾಡಲು ಈ ಯೋಜನೆಗಳನ್ನು ರೂಪಿಸಿದೆ. ತಾಯಂದಿರು, ಅಕ್ಕ ತಂಗಿಯರು ಗ್ಯಾರಂಟಿ ಯೋಜನೆಗಳಿಂದ ಬಹಳ ಸಂತುಷ್ಟರಾಗಿದ್ದಾರೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಜನಪರ ಕಾಳಜಿಯಿರುವ ಯೋಜನೆಗಳನ್ನೇ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರು



ಜಾರಿಗೊಳಿಸಿದ್ದಾರೆ. ಕಾಂಗ್ರೆಸ್ ಸರ್ಕಾರ ಇರುವವರೆಗೂ ನಮ್ಮ ಯೋಜನೆಗಳು ನಿಲ್ಲೋದಿಲ್ಲ. ಲೋಕಸಭಾ ಚುನಾವಣೆ ಬಳಿಕ ಗ್ಯಾರಂಟಿ ಯೋಜನೆಗಳನ್ನು ಇರೋದಿಲ್ಲ ಎಂದು ವಿರೋಧ ಪಕ್ಷಗಳು ಸುಳ್ಳು ಸುದ್ದಿ ಹಬ್ಬಿಸಲಾಗುತ್ತಿದೆ. ಇಂಥ ಊಹಾಪೋಹಗಳಿಗೆ ಕಿವಿಗೊಡದೆ ಸರ್ಕಾರವನ್ನು ಬೆಂಬಲಿಸಿ ಎಂದು ಸಚಿವರು ಕೋರಿದರು.

ಬಿಜೆಪಿ ಕೇವಲ ಜನರ ಭಾವನೆಗಳನ್ನು ಕೆರಳಿಸುತ್ತದೆ, ಕಾಂಗ್ರೆಸ್ ಜನರ ಬದುಕಿಗೆ ಬೇಕಾದ ಕಾರ್ಯಕ್ರಮಗಳನ್ನು ರೂಪಿಸುತ್ತದೆ. ನಮ್ಮ ಸರ್ಕಾರ ಎಂದೂ ದೇವರು-ಧರ್ಮದ ಹೆಸರಲ್ಲಿ ಮರಳು ಮಾಡಿ ಅಧಿಕಾರ ನಡೆಸುವುದಿಲ್ಲ ಎಂದರು. ಮುಂದಿನ ದಿನಗಳಲ್ಲಿ ಕರ್ನಾಟಕ ರಾಜ್ಯವು ಇನ್ನಷ್ಟು ಅಭಿವೃದ್ಧಿಯತ್ತ ಸಾಗಲಿದೆ. ಇದು ಶತಸಿದ್ಧ ಎಂದರು.

*ಅಂಗನವಾಡಿ ಕಾರ್ಯಕರ್ತರಿಗೆ ಧನ್ಯವಾದ ಅರ್ಪಿಸಿದ ಸಚಿವೆ*

ನಮ್ಮ ಯೋಜನೆಗಳನ್ನ ಜನರಿಗೆ ತಲುಪಿಸುವಲ್ಲಿ ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರು ಯಶಸ್ವಿಯಾಗಿದ್ದಾರೆ. ಅವರಿಗೆ ವೈಯಕ್ತಿಕವಾಗಿ ಅನಂತ ಧನ್ಯವಾದಗಳು ಎಂದರು. ಅಂಗನವಾಡಿ ಕಾರ್ಯಕರ್ತೆಯರ ಬೇಡಿಕೆಗಳಿಗೆ ಮುಖ್ಯಮಂತ್ರಿಗಳು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಹೇಳಿದರು.

*ಕರಾವಳಿ ಜಿಲ್ಲೆಗಳ ಅಭಿವೃದ್ಧಿಗೆ ಬದ್ಧ*

ಸಿದ್ದರಾಮಯ್ಯ ನವರು ಬಜೆಟ್‌ನಲ್ಲಿ ಮೀನುಗಾರಿಕೆಗೆ ಮೂರು ಸಾವಿರ ಕೋಟಿ ಅನುದಾನ ನೀಡಿದ್ದಾರೆ. ಇದು ಕರಾವಳಿ ಜಿಲ್ಲೆಗಳ ಮೇಲೆ ಸರ್ಕಾರಕ್ಕೆ ಇರುವ ಕಾಳಜಿ. ಮುಂದಿನ ದಿನಗಳಲ್ಲಿ ಈ ಜಿಲ್ಲೆಗಳ ಅಭಿವೃದ್ಧಿಗೆ ನಮ್ಮ ಸರ್ಕಾರ ಕಂಕಣ ಬದ್ಧವಾಗಿದೆ. ನಾನು ಈ ಜಿಲ್ಲೆಯ ಉಸ್ತುವಾರಿ ಸಚಿವೆಯಾಗಿರುವುದು ನನ್ನ ಪುಣ್ಯ ಎಂದು ಹೇಳಿದರು.

ಸಮಾರಂಭದಲ್ಲಿ ಮೀನುಗಾರಿಕೆ ಸಚಿವರಾದ ಮಂಕಾಳ ವೈದ್ಯ, ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಾದ ಜಯಪ್ರಕಾಶ್ ಹೆಗ್ಡೆ, ಮಹಿಳಾ ಕಾಂಗ್ರೆಸ್ ಅಧ್ಯಕ್ಷರಾದ ಪುಷ್ಪ ಅಮರ್ ನಾಥ್, ಎಂಎಲ್ ಸಿ ಮಂಜುನಾಥ್ ಭಂಡಾರಿ, ಚಿಕ್ಕಮಗಳೂರು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ಅಂಶುಮಾನ್, ಗೇರು ಬೀಜ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಮತಾ ಗಟ್ಟಿ, ಮುಖಂಡರಾದ ವಿನಯ್ ಕುಮಾರ್ ಸೊರಕೆ, ಉದಯ್ ಕುಮಾರ್ ಶೆಟ್ಟಿ, ಪ್ರಸಾದ್ ಕಾಂಚನ್, ದಿನೇಶ್ ಹೆಗ್ಡೆ ಮೊಗಳಿ, ಸರ್ಕಾರದ ಕಾರ್ಯದರ್ಶಿಗಳಾದ ಡಾ.ಎಂ.ಟಿ.ರೇಣು, ಐಜಿಪಿ ಬೋರಲಿಂಗಯ್ಯ, ಜಿಲ್ಲಾಧಿಕಾರಿ ವಿದ್ಯಾಕುಮಾರಿ, ಪೊಲೀಸ್ ವರಿಷ್ಠಾಧಿಕಾರಿ ಡಾ.ಅರುಣ್, ಜಿ.ಪಂ ಸಿಇಒ ಪ್ರತೀಕ್ ಬಾಯಲ್ ಉಪಸ್ಥಿತರಿದ್ದರು.